ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಎಡಿಎಂ.2/ಪ್ರಾ.ಹಂ.ಕ್ಲ-62/2009-10 ದಿನಾಂಕ:13-11-2009

**ಬಹಳ ಪ್ರಾಮುಖ್ಯವಾದುದು**

## ಸುತ್ತೋಲೆ

ವಿಷಯ:-ಸಾರ್ವಜನಿಕ ಶಿಕ್ಷಣ ಇಲಾಖೆಯ ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳ ಹುದ್ದೆಗಳನ್ನು (CAEO) ರದ್ದುಪಡಿಸುವ ಬಗ್ಗೆ

ಉಲ್ಲೇಖ:-1.ಸರ್ಕಾರದ ಆದೇಶ ಸಂಖ್ಯೆ:ಇಡಿ 109 ಡಿಪಿಐ 2007 ದಿ: 01.08.2007
2.ಸರ್ಕಾರದ ಆದೇಶ ಸಂಖ್ಯೆ:ಇಡಿ 201 ಎಸ್ಒಹೆಸ್2007ದಿ: 09.11.2009

--000--

ಉಲ್ಲೇಖಿತ-2 ರ ಆದೇಶದಲ್ಲಿ ದಿನಾಂಕ:-09-11-2009 ರಂದು ತಕ್ಷಣದಿಂದ ಜಾರಿಗೆ ಬರುವಂತೆ ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳ ಹುದ್ದೆಗಳನ್ನು (CAEO) ರದ್ದುಪಡಿಸಿ ಸರಕಾರವು ಆದೇಶಿಸಿರುತ್ತದೆ. ಉಲ್ಲೇಖ-1 ಆದೇಶದ ಹಿಂದೆ ಇದ್ದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಪೂರ್ಣ ಅಧಿಕಾರವನ್ನು ಪ್ರತ್ಯಾಯೋಜಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶವಾಗಿರುತ್ತದೆ.

ಆದಕಾರಣ ಇನ್ನು ಮುಂದೆ ರಾಜ್ಯದ ಎಲ್ಲಾ ಶೈಕ್ಷಣಿಕ ಆಡಳಿತಾತ್ಮಕ ಮತ್ತು ಆರ್ಥಿಕ ಅಧಿಕಾರಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿರ್ವಹಿಸಬೇಕಾಗಿದ್ದು ಅವರುಗಳು ಅವರ ಕಾರ್ಯವ್ಯಾಪ್ತಿಯಲ್ಲಿ ಯಾವುದೇ ಕುಂದು ಕೊರತೆಗಳು ಬರದಂತೆ ಈ ಕೆಳಕಂಡಂತೆ ಕ್ರಮ ವಹಿಸಲು ತಿಳಿಸಿದೆ.

1. ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳಿಂದ (CAEO) ಕೂಡಲೇ ಎಲ್ಲಾ ಶಿಕ್ಷಕರುಗಳ ಸೇವಾಮುಸ್ತಕಗಳನ್ನು ಸಂಬಂದಿಸಿದ ಎಲ್ಲಾ ಕಡತಗಳನ್ನು ತಮ್ಮ ಕಛೇರಿಗೆ ವಾಪಸ್ಸು ಪಡೆಯುವುದು
2. ಈಗಾಗಲೇ ನೀಡಿರುವ ಅನುದಾನ, ಶಿಕ್ಷಕರ ವೇತನ, ವಂಟನಾ ಮತ್ತು ಇನ್ನಿತರೆ ಮಾಹಿತಿಗಳನ್ನು ತಮ್ಮ ಕಛೇರಿಗೆ ವಾಪಸ್ಸು ಪಡೆಯುವುದು
3. ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳ ಹುದ್ದೆಗಳು (CAEO) ರದ್ದುಪಡಿಸಿರುವ ಆದೇಶವನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಎಲ್ಲಾ ಜಿಲ್ಲಾ / ತಾಲ್ಲೂಕು ಖಜಾನಾಧಿಕಾರಿಗಳಿಗೆ ತಮ್ಮ ಮಾದರಿ ಸಹಿಯ ಧೃಡೀಕರಣದೊಂದಿಗೆ ಸಲ್ಲಿಸಿ ಎಲ್ಲಾ ಶಿಕ್ಷಕರುಗಳ ವೇತನವನ್ನು ಪಡೆಯುವ ಬಗ್ಗೆ ಅವರಿಗೆ ಮಾಹಿತಿಯನ್ನು ನೀಡಿ ಏನಾದರೂ ಕಾನೂನು ತೊಡಕುಗಳಿದ್ದಲ್ಲಿ ಅದನ್ನು ಸರಿಪಡಿಸಿ ಕ್ರಮ ತೆಗೆದುಕೊಳ್ಳುವುದು. ಶಿಕ್ಷಕರ ವೇತನವನ್ನು ಸಮಯಕ್ಕೆ ಸರಿಯಾಗಿ ಪಡೆಯಲು ವಿಳಂಬ ಮಾಡಿದಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಹಾಗೂ ಶಿಸ್ತಿನ ಕ್ರಮ ಜರುಗಿಸಲಾಗುವುದು.
4. ಸಂಬಂದಿಸಿದ ತಾಲ್ಲೂಕಿನ ಸರ್ಕಾರಿ ಶಾಲೆಗಳ ಎಲ್ಲಾ ಶಿಕ್ಷಕರುಗಳ ವೇತನದ ಬಿಲ್ಲುಗಳನ್ನು ತಯಾರಿಸಿ ನಿಗದಿತ ಸಮಯಕ್ಕೆ ಖಜಾನೆಗೆ ಸಲ್ಲಿಸಿ ಪ್ರತಿ ಮಾಹೆ 1ನೇ ತಾರೀಖಿನೊಳಗೆ ವೇತನವನ್ನು ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳುವುದು. ಯಾವುದೇ ಶಿಕ್ಷಕರಿಗೆ ವೇತನ ತಡವಾಗಿ ಅಥವಾ ಅವರ ಹೆಸರನ್ನು ಕೈಬಿಡುವ ಸಂಬಂದ ಏನಾದರೂ ಲೋಪ ಕಂಡುಬಂದಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳೇ ಜವಾಬ್ದಾರರಾಗುತ್ತಾರೆ ಎಂದು ತಿಳಿಸಿದೆ.

5. ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರುಗಳ ವೇತನ ಬಿಲ್ಲುಗಳಿಗೆ ಮೇಲುಸಹಿ ಮಾಡಿ ಸಂಬಂದಿಸಿದ ಶಿಕ್ಷಕರುಗಳಿಗೆ ವೇತನ ಪಾವತಿ ಮಾಡಲು ಅಗತ್ಯ ಕ್ರಮ ತೆಗೆದುಕೊಳ್ಳುವುದು
6. ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಅವರಿಗೆ ಅಧಿಕಾರವನ್ನು ನೀಡಿದಾಗಲಿಂದ ಅಂದರೆ ದಿನಾಂಕ:-01-08-2007 ರಿಂದ ರದ್ದುಪಡಿಸಿರುವ ಆದೇಶ ದಿನಾಂಕ:-09-11-2009 ರ ವರೆಗಿನ ಎಲ್ಲಾ ಪತ್ರ ವ್ಯವಹಾರಗಳು ದಸ್ತಾವೇಜುಗಳು, ದಾಖಲೆಗಳನ್ನು ಸಹ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಕಛೇರಿಗೆ ಪಡೆದುಕೊಂಡು ವ್ಯವಸ್ಥಿತ ರೀತಿಯಲ್ಲಿ ನಿರ್ವಹಿಸುವುದು
7. ಸಂಬಂದಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರು ತಮ್ಮ ಜಿಲ್ಲೆಗೆ ಸಂಬಂಧಿಸಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಿ ಸರ್ಕಾರದ ಆದೇಶದಂತೆ ಸಹಾಯಕ ಶಿಕ್ಷಣಾಧಿಕಾರಿಗಳ ಹುದ್ದೆಗಳು (CAEO) ರದ್ದುಪಡಿಸಿರುವ ಬಗ್ಗೆ ಹಾಗೂ ಎಲ್ಲಾ ವ್ಯವಹಾರಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳೇ ನಿರ್ವಹಿಸಲು ಶಿಕ್ಷಕರ ವೇತನ ಮತ್ತು ಸೇವೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ತಕ್ಷಣವೇ ಕ್ರಮ ಕೈಗೊಳ್ಳಲು ಸೂಚಿಸುವುದು.

ಈ ಎಲ್ಲಾ ಸೂಚನೆಗಳನ್ನು ತಪ್ಪದೇ ಪಾಲಿಸಿ ದಿನಾಂಕ:-18-11-2009 ರೊಳಗೆ ಸೂಕ್ತವಾಗಿ ನಿರ್ವಹಿಸಿ ಶಿಕ್ಷಕರುಗಳಿಗೆ ಈ ಮಾಹೆಯ ವೇತನವನ್ನು ಸಕಾಲದಲ್ಲಿ ನೀಡಲು ಕ್ರಮ ಕೈಗೊಂಡು ತೆಗೆದುಕೊಂಡ ಕ್ರಮದ ಬಗ್ಗೆ ಈ ಕಛೇರಿಗೆ ವರದಿ ಮಾಡಲು ಸೂಚಿಸಿದೆ.

(ಬಿ.ಎ ಹರೀಶ್ ಗೌಡ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು
2. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ (ಉಲ್ಲೇಖಿತ-2 ರ ಸರ್ಕಾರದ ಆದೇಶದ ಪ್ರತಿಯೊಂದಿಗೆ)
3. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ(ಉಲ್ಲೇಖಿತ-2 ರ ಸರ್ಕಾರದ ಆದೇಶದ ಪ್ರತಿಯೊಂದಿಗೆ)
4. ನಿರ್ದೇಶಕರು, ಖಜಾನೆ ಇಲಾಖೆ,/ ಇಲಾಖೆಯ ಅಧಿಕಾರಿಗಳಿಗೆ, ಸೂಕ್ತ ನಿರ್ದೇಶನ ನೀಡಬೇಕು ಎನ್ನುವ ವಿನಂತಿಯೊಂದಿಗೆ,

ಇವರಿಗೆ

5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಮೂಹ ಸಹಾಯಕ ಶಿಕ್ಷಣಾಧಿಕಾರಿಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಯವರ ಮುಖಾಂತರ)
8. ಕಛೇರಿ ಪ್ರತಿ